[redacted]



# ಮತ ಎಣಿಕಾ ಕೇಂದ್ರಕ್ಕೆ ಚುನಾವಣಾ ವೀಕ್ಷಕರೊಂದಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ

## ಸುಗಮ ಮತ ಎಣಿಕಾ ಕಾರ್ಯಕ್ಕೆ ಕೈಗೊಂಡಿರುವ ಸಿದ್ಧತೆಗಳ ಕುರಿತು ಮನವರಿಕೆ



ಬಳ್ಳಾರಿ,ಏ–:ಬಳ್ಳಾರಿ ಲೋಕಸಭಾ ಸ್ಥಾನಕ್ಕಾಗಿ ಮೇ 07 ರಂದು ಮತದಾನ ನಡೆಯುಲಿದ್ದು, ಮತಗಳ ಎಣಿಕಾ ಕಾರ್ಯ ಜೂ.04 ರಂದು ಬಳ್ಳಾರಿ ನಗರದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು ಕಟ್ಟಡದಲ್ಲಿ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಚಲಾವಣೆಗೊಂಡ ಮತಯಂತ್ರಗಳ ಸಂಗ್ರಹಾ ಕೊಠಡಿ (ಸ್ಟ್ರಾಂಗ್ ರೂಂ) ಹಾಗೂ ಮತಗಳ ಎಣಿಕಾ ಕಾರ್ಯಕ್ಕೆ ಕೈಗೊಳ್ಳಲಾಗುತ್ತಿರುವ ಸಿದ್ಧತೆಗಳ ಕುರಿತು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಚುನಾವಣಾ ಸಾಮಾನ್ಯ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರಿಗೆ ಮಾಹಿತಿ ನೀಡಿ ಮನವರಿಕೆ ಮಾಡಿಕೊಟ್ಟರು.

ಬಳ್ಳಾರಿ ನಗರದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು ಕಟ್ಟಡಕ್ಕೆ ಮಂಗಳವಾರ ಚುನಾವಣಾ ವೀಕ್ಷಕರೊಂದಿಗೆ ಭೇಟಿ ನೀಡಿದ ಅವರು ಡಿಮಸ್ಟರಿಂಗ್ ಹಾಗೂ ಮತ ಎಣಿಕೆ ಕಾರ್ಯಗಳ ಸಿದ್ಧತೆಗಳ ಕುರಿತು ಚುನಾವಣಾ ವೀಕ್ಷಕರಿಗೆ ಮಾಹಿತಿ ನೀಡಿದರು.ಬಳ್ಳಾರಿ ಜಿಲ್ಲೆಯಲ್ಲಿ ಚುನಾವಣೆ ಪ್ರಕ್ರಿಯೆಗಳನ್ನು ಅತ್ಯಂತ ಪಾರದರ್ಶಕವಾಗಿ ಕೈಗೊಳ್ಳಲಾಗುತ್ತಿದೆ. ಲೋಕಸಭೆ ಚುನಾವಣೆ ನಿಮಿತ್ಯ ಮೇ 07 ರಂದು ಮತದಾನ ನಡೆಯಲಿದ್ದು, ಅದೇ ದಿನ ಸಂಜೆ ಮತದಾನ ಪ್ರಕ್ರಿಯೆ ಮುಗಿದ ಬಳಿಕ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಹಡಗಲಿ, ಹಗರಿಬೊಮ್ಮನಹಳ್ಳಿ, ವಿಜಯನಗರ, ಕಂಪ್ಲಿ, ಬಳ್ಳಾರಿ (ಗ್ರಾಮೀಣ), ಬಳ್ಳಾರಿ (ನಗರ), ಸಂಡೂರು ಹಾಗೂ ಕೂಡ್ಲಿಗಿ ಸೇರಿದಂತೆ ಒಟ್ಟು 08 ವಿಧಾನಸಭಾ ಕ್ಷೇತ್ರಗಳ ಮತಯಂತ್ರಗಳನ್ನು ಕಾಲೇಜು ಕಟ್ಟಡದಲ್ಲಿಯೇ ಪ್ರತ್ಯೇಕ ಕೊಠಡಿಗಳಲ್ಲಿ ಸಂಗ್ರಹಿಸಲಾಗುವುದು. ಮತಯಂತ್ರಗಳನ್ನು ಅತ್ಯಂತ ಭದ್ರತೆಯಲ್ಲಿ, ನಿಯಮಾನುಸಾರ ಇರಿಸಲಾಗುವುದು ಎಂದರು.ಮತಗಳ ಎಣಿಕಾ ಕಾರ್ಯ ಜೂ.04 ರಂದು ಇದೇ ಕಾಲೇಜಿನ ಕಟ್ಟಡದಲ್ಲಿ ನಡೆಯುಲಿದ್ದು, ಚುನಾವಣಾ ಆಯೋಗದ ಮಾರ್ಗಸೂಚಿಯನುಸಾರ ಇದಕ್ಕೆ ಬೇಕಾದ ಸಿದ್ಧತೆಗಳನ್ನು ಈಗಾಗಲೆ ಪ್ರಾರಂಭಿಸಲಾಗಿದೆ. ಕಾಲೇಜು ಕಟ್ಟಡದ ನೆಲ ಮಹಡಿ, ಮೊದಲನೆ ಮಹಡಿ ಹಾಗೂ ಎರಡನೆ ಮಹಡಿಯನ್ನು ಸ್ಟ್ರಾಂಗ್ ರೂಂ ಗಾಗಿ ಹಾಗೂ ಮತ ಎಣಿಕಾ ಕಾರ್ಯಗಳಿಗೆ ಬಳಸಿಕೊಳ್ಳಲಾಗುವುದು. ಕಾಲೇಜು ಕಟ್ಟಡ ಸುತ್ತ ಇರುವ ಕಾಂಪೌಂಡ್ ವ್ಯವಸ್ಥೆ, ಕೈಗೊಳ್ಳಲಾಗುವ ಬಂದೋಬಸ್ತ್ ವ್ಯವಸ್ಥೆ ಬಗ್ಗೆ ಜಿಲ್ಲಾಧಿಕಾರಿಗಳು ವಿವರಗಳನ್ನು ಒದಗಿಸಿದರು.

ಬಳ್ಳಾರಿ ಕ್ಷೇತ್ರ ಚುನಾವಣಾ ವೀಕ್ಷಕ ಚಂದ್ರಶೇಖರ ಸಖಮುರಿ ಅವರು, ಎಲ್ಲ ವಿಧಾನಸಭಾ ಕ್ಷೇತ್ರಗಳಿಂದ ಬರುವ ಮತಯಂತ್ರಗಳನ್ನು ಇಡುವ ಸ್ಟ್ರಾಂಗ್ ರೂಂ ಗಳಿಗೆ ಹಾಗೂ ಮತ ಎಣಿಕಾ ಕೊಠಡಿಗಳಿಗೆ ಭೇಟಿ ನೀಡಿ, ಕೈಗೊಳ್ಳಲಾಗುತ್ತಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದರು. ಇಡೀ ಕಾಲೇಜು ಕಟ್ಟಡದ ನೀಲಿ ನಕ್ಷೆಯನ್ನು ಪಡೆದು, ಯಾವ ಯಾವ ಕೊಠಡಿಯಲ್ಲಿ ಯಾವ ಕ್ಷೇತ್ರದ ಮತಯಂತ್ರಗಳನ್ನು ಇರಿಸುವುದು ಹಾಗೂ ಮತ ಎಣಿಕೆ ನಡೆಸಲಾಗುವುದು ಎಂಬುದರ ಮಾಹಿತಿ ಪಡೆದು ಕೂಲಂಕಷವಾಗಿ ಪರಿಶೀಲಿಸಿದರು.ಸ್ಟ್ರಾಂಗ್ ರೂಂ ಸಿದ್ಧಪಡಿಸುವುದು, ಬಂದೋಬಸ್ತ್ ಹಾಗೂ ಮತ ಎಣಿಕಾ ಕೊಠಡಿಗಳ ಸಿದ್ಧತೆಗಳು, ಅಂಚೆ ಮತಗಳ ಎಣಿಕೆಗೆ ಸಿದ್ಧತೆಗಳು, ಚುನಾವಣಾ ಏಜೆಂಟರು, ಸಿಬ್ಬಂದಿಗಳ ಆಗಮನ, ನಿರ್ಗಮನ ವಿಷಯಗಳು ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಇರಬೇಕು, ಕಟ್ಟಡದಲ್ಲಿ ವಿದ್ಯುತ್ ಸಂಪರ್ಕ ಸುರಕ್ಷತೆ, ಕೊಠಡಿಗಳ ಸುರಕ್ಷತೆ ಕುರಿತು ಅತ್ಯಂತ ಎಚ್ಚರಿಕೆ ವಹಿಸಬೇಕು. ಸುಗಮ ಡಿಮಸ್ಟರಿಂಗ್ ಹಾಗೂ ಮತ ಎಣಿಕಾ ಕಾರ್ಯ ನಡೆಸಲು ಕೆಲವು ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಬಳ್ಳಾರಿ ಲೋಕಸಭಾ ಚುನಾವಣೆಯ ಪೊಲೀಸ್ ವೀಕ್ಷಕ ಧರ್ಮೇಂದ್ರ ಸಿಂಗ್ ಭದೌರಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು ಅವರು ಉಪಸ್ಥಿತರಿದ್ದರು.

# ಲೋಕಸಭಾ ಚುನಾವಣೆ: ಅಭ್ಯರ್ಥಿಗಳು ಹಾಗೂ ಏಜೆಂಟರೊಂದಿಗೆ ಸಭೆ

## ಚುನಾವಣಾ ಸಭೆ, ಸಮಾರಂಭಗಳಿಗೆ ಅನುಮತಿ ಕಡ್ಡಾಯ: ಹೇಮ ಪುಷ್ಪ ಶರ್ಮಾ



ಕೊಪ್ಪಳ, ಏಪ್ರಿಲ್ –: ಚುನಾವಣಾ ಸಾರ್ವಜನಿಕ ಸಭೆ, ಸಮಾರಂಭಗಳಿಗೆ ಕಡ್ಡಾಯವಾಗಿ ಅನುಮತಿ ಪಡೆಯಬೇಕು ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಚುನಾವಣಾ ಸಾಮಾನ್ಯ ವೀಕ್ಷಕರಾದ ಹೇಮ ಪುಷ್ಪ ಶರ್ಮಾ ಅವರು ಹೇಳಿದರು.

ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಕೊಪ್ಪಳ ಲೋಕಸಭಾ ಕ್ಷೇತ್ರದ ಅಭ್ಯರ್ಥಿಗಳು ಹಾಗೂ ಏಜೆಂಟರೊಂದಿಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರಹಮ್ಮಿಕೊಳ್ಳಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರಗಳ ಸಲ್ಲಿಕೆ ಈಗಾಗಲೇ ಪೂರ್ಣಗೊಂಡು ಅಂತಿಮವಾಗಿ ಚುನಾವಣಾ ಕಣದಲ್ಲಿರುವ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಮತ್ತು ಪಕ್ಷೇತರ ಅಭ್ಯರ್ಥಿಗಳು ಚುನಾವಣಾ ವೆಚ್ಚದ ಸಂಪೂರ್ಣ ವಿವರಣೆಯನ್ನು ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ರ್‍ಯಾಲಿ, ಸಾರ್ವಜನಿಕ ಸಭೆ, ಸಮಾರಂಭಗಳಿಗೆ ಆಯಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಸಹಾಯಕ ಚುನಾವಣಾಧಿಕಾರಿಗಳಿಂದ ಹಾಗೂ ಜಿಲ್ಲಾಮಟ್ಟದ ಕೆಲವು ಅನುಮತಿಗಳಿಗೆ ಜಿಲ್ಲಾ ಚುನಾವಣಾಧಿಕಾರಿಗಳಿಂದ ಅನುಮತಿ ಪಡೆದುಕೊಳ್ಳಬೇಕು ಎಂದುತಿಳಿಸಿದರು.ಅಭ್ಯರ್ಥಿಗಳು ಚುನಾವಣಾ ವೆಚ್ಚ ನಿರ್ವಹಣೆಗಾಗಿಯೇ ಬ್ಯಾಂಕ್‌ನಲ್ಲಿ ಪ್ರತ್ಯೇಕವಾಗಿ ಹೊಸ ಖಾತೆಯನ್ನು ತೆರೆಯುವುದು ಕಡ್ಡಾಯವಾಗಿದೆ. ಚುನಾವಣಾ ವೆಚ್ಚದ ಸಂಪೂರ್ಣ ವಿವರಣೆಯನ್ನು ರಿಜಿಸ್ಟರ್‌ನಲ್ಲಿ ನಮೂದಿಸಬೇಕು. ಇದರ ಜೊತೆಗೆ ಪ್ರತಿ ಅಭ್ಯರ್ಥಿವಾರು ಶ್ಯಾಡೋ ವೆಚ್ಚ ರಿಜಿಸ್ಟರ್ ಅನ್ನು ನಿರ್ವಹಿಸಲಾಗುವುದು. ಅಭ್ಯರ್ಥಿಗಳು ವಾಸ್ತವವಾಗಿ ಚುನಾವಣಾ ವೆಚ್ಚ ಕೈಗೊಂಡಿದ್ದು, ಅಭ್ಯರ್ಥಿ ನೀಡುವ ವಿವರದಲ್ಲಿ ನಮೂದಾಗದೇ ಇರುವ ವೆಚ್ಚದ ವಿವರಗಳನ್ನು ಚುನಾವಣಾ ಅಧಿಕಾರಿಗಳು ಶ್ಯಾಡೋ ವೆಚ್ಚ ರಿಜಿಸ್ಟರ್‌ನಲ್ಲಿನಮೂದಿಸಿಟ್ಟುಕೊಳ್ಳುತ್ತಾರೆ. ಅಭ್ಯರ್ಥಿಗಳು ತಪ್ಪು ಮಾಹಿತಿ ನೀಡಲು ಯತ್ನಿಸಿದಲ್ಲಿ, ಶ್ಯಾಡೋ ರಿಜಿಸ್ಟರ್‌ನಲ್ಲಿನ ಮಾಹಿತಿಯೊಂದಿಗೆ ತಾಳೆ ಹಾಕಲಾಗುವುದು. ಚುನಾವಣಾ ಸಂದರ್ಭದಲ್ಲಿ ಪ್ರತಿ ಅಭ್ಯರ್ಥಿ ಮೂರು ಬಾರಿ ವೆಚ್ಚದ ವಿವರವನ್ನುಚುನಾವಣಾಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಸಾಮಾನ್ಯ ವೀಕ್ಷಕರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳುಹಾಗೂಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಮಾತನಾಡಿ, ಕೊಪ್ಪಳ ಲೋಕಸಭಾಕ್ಷೇತ್ರದಲ್ಲಿ9,19,499 ಪುರುಷ, 9,46,763 ಮಹಿಳಾ ಹಾಗೂ 135 ಇತರೆ ಸೇರಿ ಒಟ್ಟು 18,66,397 ಮತದಾರರಿದ್ದಾರೆ. ಹೋಮ್ ವೋಟಿಂಗ್‌ಗಾಗಿ ರೂಟ್ ಮ್ಯಾಪ್‌ನ್ನು ವಿಧಾನಸಭಾ ಕ್ಷೇತ್ರವಾರುಸಿದ್ದಪಡಿಸಿಕೊಳ್ಳಲಾಗಿದೆ. ಚುನಾವಣಾ ನಿಮಿತ್ತ ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ಸಾಮಾನ್ಯ ವೀಕ್ಷರು, ಚುನಾವಣಾ ವೆಚ್ಚ ವೀಕ್ಷಕರು ಹಾಗೂ ಪೊಲೀಸ್ ವೀಕ್ಷಕರು ಕೊಪ್ಪಳ ಜಿಲ್ಲೆಗೆ ಆಗಮಿಸಿದ್ದು, ಜಿಲ್ಲಾಡಳಿತ ಭವನದಲ್ಲಿ ಬೆಳಿಗ್ಗೆ 11 ರಿಂದ ಮಾಧ್ಯಾಹ್ನ 3 ಗಂಟೆಯವರೆಗೆ ಲಭ್ಯವಿರುವರು ಎಂದು ಹೇಳಿದರು. ಸಭೆಯಲ್ಲಿ ಪೊಲೀಸ್ ವೀಕ್ಷಕರಾದ ಡಾ.ಸತೀಶ ಕುಮಾರ್, ಜಿಲ್ಲಾ ಪೊಲೀಸ್‌ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ, ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಅಭ್ಯರ್ಥಿಗಳು ಮತ್ತು ಏಜೆಂಟರು ಉಪಸ್ಥಿತರಿದ್ದರು.

# ಸಚಿವ ನಾಗೇಂದ್ರ ಅವರಿಗೆ ಅಪಾರ ಬೆಂಬಲ ತೋರಿಸಿದ ಗ್ರಾಮಸ್ಥರು



ಬಳ್ಳಾರಿ ಏ –: ಬಳ್ಳಾರಿ ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಯುವ ಸಬಲೀಕರಣ, ಕ್ರೀಡೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ವ್ಯಾಪ್ತಿಯ ಬೆಳಗಲ್ ತಾಂಡ. ಬೆಳಗಲ್ ಹರಗಿನಡೋಣಿ. ಜಾನೆಕುಂಟೆ ಗ್ರಾಮಗಳಲ್ಲಿ ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿ ಈ.ತುಕಾರಾಂ ಪರವಾಗಿ ಭರ್ಜರಿ ಮತ ಪ್ರಚಾರ ನಡೆಸಿದರು.

ಸರ್ಕಾರದ ಕಾರ್ಯಕ್ರಮಗಳನ್ನು ಮೆಚ್ಚಿ ಸಚಿವ ಬಿ.ನಾಗೇಂದ್ರ ಅವರ ಸಮ್ಮುಖದಲ್ಲಿಬೆಳಗಲ್ ಗ್ರಾಮದ ಸುಮಾರು ಇಪ್ಪತ್ತಕ್ಕೂ ಹೆಚ್ಚು ಬಿಜೆಪಿ ಕಾರ್ಯಕರ್ತರು ಪಕ್ಷ ತೊರರದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು. ಈ ವೇಳೆ ಸಚಿವ ನಾಗೇಂದ್ರ ಅವರು ಮಾತನಾಡಿ,ಕಾಂಗ್ರೆಸ್ ಸರ್ಕಾರ ದೀನ, ದಲಿತರ ಹಾಗೂ ಶೋಷಿತರು, ಬಡವರ ಪರ ಇರುಂತ ಸರ್ಕಾರ.ಕಳೆದ ವಿಧಾನಸಭೆ ಚುನಾವಣೆ ವೇಳೆ ಹೇಳಿದಂತೆ ಭಾಗ್ಯಗಳನ್ನ ನಾಡಿನ ಜನತೆಗೆ ನೀಡುವ ಮೂಲಕ ನುಡಿದಂತೆ ನಡೆದುಕೊಂಡಿದ್ದೇವ

'.ಇದೀಗ ಲೋಕಸಭಾ ಚುನಾವಣಾ ಹೊಸ್ತಿಲಲ್ಲಿದ್ದು ಪಕ್ಕದ ಸಂಡೂರು ಕ್ಷೇತ್ರದ ಶಾಸಕ ತುಕಾರಾಂ ಅವರು ಲೋಕಸಭಾ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ. ಅವರು ತುಂಬಾ ಸೌಮ್ಯ ಸ್ವಭಾವ ಉತ್ತಮ ನಡವಳಿಕೆ ಹಾಗೂ ಚೆನ್ನಾಗಿ ಓದಿಕೊಂಡವರಾಗಿರುತ್ತಾರೆ ಅದ್ದರಿಂದ ನೀವುಗಳು ತುಕಾರಾಂ ಅವರಿಗೆ ಮತ ನೀಡುವ ಮೂಲಕ ಗೆಲಗಲಿಸಿ ಕಳಿಸಿದರೆ ಈ ಭಾಗದ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲುವ ಮೂಲಕ ಧ್ವನಿಯಾಗುತ್ತಾರೆ ಎಂದರಲ್ಲದೆ,ರಾಜ್ಯ ಸರ್ಕಾರದ ಗ್ಯಾರೆಂಟಿ ಜೊತೆ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಲ್ಲಿ ವರ್ಷಕ್ಕೆ ಒಂದು ಕುಟುಂಬಕ್ಕೆ ಒಂದು ಲಕ್ಷ ಗ್ಯಾರೆಂಟಿ ಯೋಜನೆಯ ಹಣ ದೊರೆಯಲಿದೆ ಅದ್ದರಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ತುಕಾರಾಂ ಅವರನ್ನ ಹೆಚ್ಚಿನ ಬಹುಮತದಿಂದ ಗೆಲ್ಲಿಸುವಂತೆ ಮನವಿ ಮಾಡಲಾಗಿದೆ, ಕಡೆವರೆಗೂ ನಮ್ಮ ಜೊತೆ ನಮ್ಮ ಕಷ್ಟ–ಸುಖಗಳಲ್ಲಿ ಭಾಗಿಯಾಗಿ ನಮ್ಮೊಟ್ಟಿಗೆ ಸರಿಯಾಗಿ ಜನ ನೋಡಿಲ್ಲ ಅದರು ಸಚಿವರ ಪ್ರಭಾವ ದೊಡ್ಡ ಮಟ್ಟದಲ್ಲಿ ಇದೇ ಎಂದು ಕಾಣುತ್ತದೆ.

ಪ್ರಚಾರ ಕಾರ್ಯಕ್ರಮದಲ್ಲಿ ಜಿಲ್ಲಾನಗರ ಕಾಂಗ್ರೆಸ್ ಅಧ್ಯಕ್ಷರಾದ ಅಲ್ಲಂ. ಪ್ರಶಾಂತ್ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಮಂಜುಳಾ.ಪಕ್ಷದ ಮುಖಂಡರಾ ದ.ಸಣ್ಣಬಸವರಾಜ್.ಮಹಾರುದ್ರಗೌಡ.ಎ.ಮಾನಯ್ಯ.ವೆಂಕ ಪ್ರಸಾದ್ .ವೆಂಕಟರಾವ್ ನಾನ. ಗೋವರ್ಧನರೆ ಡ್ಡಿ.ಹೊನ್ನಪ್ಪ. ಹೊನ್ನೂರ ಪ್ಪ.ಪಿ.ಜಗನ್ನಾಥ. ಎಲ್.ಮಾರೆಣ್ಣ.ಮುದಿ ಮಲ್ಲಯ್ಯ.ನಾಗಭೂಳಣಗೌ ಡ ಸೇರಿದಂತೆ ಹಲವಾರು ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

# ನ್ಯೂ ಬೃಂದಾವನ ಸಾಯಿ ಕಾಲೋನಿಯಲ್ಲಿ ಹನುಮನ ಜಯಂತಿ



ಬೆಳಗಾವಿ–:ಅಪಹರಣ ಮಾಡಿದವನ್ನು ಉಪಚರಿಸಲಿಲ್ಲ ಹನುಮ. ರಾಮನ ಆಜ್ಞೆಯಂತೆ ರಾವಣನಿಗೆ ಪಾಠ ಕಲಿಸಿ ಸೀತೆಯನ್ನು ತಂದ ರಾಮನ ಬಲಗೈ ಬಂಟ ಹನುಮ. ಇವತ್ತು ಹನುಮನ ಜಯಂತಿ ಆಚರಿಸಯತ್ತಿದ್ದೇವೆ. ಹನುಮನ ಆದರ್ಶವನ್ನು ನಾವು ಅಳವಡಿಸಿಕೊಳ್ಳಲೇ ಬೇಕು ಎಂದು ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಜಿ ಹೇಳಿದರು.

ಮಂಗಳವಾರ ಇಲ್ಲಿನ ಮಹಾಂತೇಶ ನಗರದ ಬಳಿಯ ಕಣಬರಗಿ ರಸ್ತೆಯ ನ್ಯೂ ಬೃಂದಾವನ ಸಾಯಿ ಕಾಲೋನಿಯಲ್ಲಿ ಕೇವಲ 15 ದಿನದಲ್ಲಿ ಮಂದಿರ ಮತ್ತು ಹನುಮಂತನ ಮೂರ್ತಿ ಪ್ರತಿಷ್ಠಾಪನೆಯ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು.

ಕೇವಲ 15 ದಿನದಲ್ಲಿ ಹನುಮನ ಮಂದಿರ ಸ್ಥಾಪನೆ ಮಾಡಿ ಪವಾಡ ಸದೃಶ ಕಾರ್ಯಕ್ರಮ ಬೆಳಗಾವಿ ನಗರದಲ್ಲಿ ನಡೆದಿದೆ ಎಂದರು. ನೇಹಾ ಹಿರೇಮಠಳ ಹತ್ಯೆಯನ್ನು ಮಾಡಿರುವ ಆ ದುಷ್ಟ ಯುವಕನಿಗೆ ಶಿಕ್ಷೆಯಾಗಬೇಕು ಎಂದು ನಾವು ಪ್ರಾರ್ಥಿಸಿಕೊಳ್ಳೋಣ. ಅಲ್ಲದೆ, ನಮ್ಮವರಿಗೆ ಅನ್ಯಾಯವಾದಾಗ ಧ್ವನಿ ಎತ್ತುವ ಕಾರ್ಯ ಮಾಡೋಣ ಎಂದು ಶ್ರೀಗಳು ನೋವುನಿಂದ ನುಡಿದರು. ನಿರಂಜನಯ್ಯ ಹಿರೇಮಠರ ಕುಟುಂಬಕ್ಕೆ ಸಾಂತ್ವನ ಹೇಳಿದರೆ ಸಾಲದು ಸರಕಾರಕ್ಕೆ ನಾವೆಲ್ಲರೂ ಕವಿಮಾತನ್ನು ಹೇಳಬೇಕು ಎಂದರು.ಈ ಸಂದರ್ಭದಲ್ಲಿ ಮಹೇಶ ಹಿರೇಮಠ, ಕಿರಣ ತೋರಗಲ, ನಿಂಗಪ್ಪ ಹಟ್ಟಿ, ಸೋಹಾಸ ಜಗಜಂಪಿ, ಸಂತೋಷ ದೋರಲೆ, ಸಂತೋಷ ಪಾಟೀಲ್, ರಾಜು ಹಿರೇಮಠ, ವಿನೋದ್ ಮಾಲೇದಾರ, ಶ್ರೀಕಾಂತ ಮಾಲೇದಾರ, ಕಿರಣಗಣಾಚಾರಿ, ಚನ್ನಬಸಯ್ಯ ಹಿರೇಮಠ ಇದ್ದರು.

# ಮಲ್ಲಿಕಾರ್ಜುನ ಸ್ವಾಮಿ ಜಾತ್ರಾ ಮಹೋತ್ಸವ



ಯರಗಟ್ಟಿ: ಸಮೀಪದ ಸತ್ತಿಗೇರಿ ಗ್ರಾಮದ ಮಲ್ಲಿಕಾರ್ಜುನ ದೇವಸ್ಥಾನ ಆವರಣದಲ್ಲಿ ಮಂಗಳವಾರ ಬೆಳಗ್ಗೆಯಿಂದಲೇ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು.

ಭಕ್ತರು ಬೆಳಗ್ಗೆಯಿಂದಲೇ ಮಲ್ಲಿಕಾರ್ಜುನ ಸ್ವಾಮಿಗೆ ರುದ್ರಾಭಿಷೇಕ, ಪುಷ್ಪಾರ್ಚನೆ, ಬಿಲ್ವಾರ್ಚನೆ ಹಾಗೂ ವಿಶೇಷ ಪೂಜೆ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ನೇರವೇರಿದವು.

ರಥೋತ್ಸವಕ್ಕೂ ಮುಂಚೆ ಕುಂಭಮೇಳ, ನಂದಿಕೋಲ್ ಮೆರವಣೆಗೆ ಹಾಗೂ ವಿವಿಧ ಕಲಾತಂಡಾಗಳಿಂದ ರಥೋತ್ಸವ ಕಾರ್ಯಕ್ರಮ ಸಂಭ್ರಮದಿಂದ ಜರುಗಿತು.ಜಾತ್ರೆ ನೋಡಲು ಅಪಾರ ಸಂಖ್ಯೆಯಲ್ಲಿ ಜನಸ್ತೋಮ ಪಾಲುಗೊಂಡಿತ್ತು. ಭಕ್ತರು ರಥೋತ್ಸವಕ್ಕೆ ಉತ್ತುತ್ತಿ–ಬಾಳೆಹಣ್ಣು ಎಸೆಯುವುದರ ಮೂಲಕ ಮಲ್ಲಿಕಾರ್ಜುನ ಸ್ವಾಮಿಯ ಭಕ್ತಿಗೆ ಪಾತ್ರರಾದರು.

# ಮುಂಡರಗಿ: ನರೇಗಾ ಕೆಲಸದ ನಂತರ ಕಾರ್ಮಿಕರಿಗೆ ಕಬಡ್ಡಿ, ಖೋಖೋ ಆಟ



ಗದಗ: ಜಿಲ್ಲೆಯ ಮುಂಡರಗಿ ತಾಲೂಕು ಪಂಚಾಯತಿ ವಿಭಿನ್ನ ಮತ್ತು ವಿಶಿಷ್ಟ ನಡೆ ಅನುಸರಿಸಿ ನರೇಗಾ ಯೋಜನೆಗೆ ಸಾಂಸ್ಕೃತಿಕ, ಜನಪದ ಮೆರುಗು ನೀಡುತ್ತಿದೆ. ನರೇಗಾ ಯೋಜನೆಯಡಿ ಹೆಚ್ಚು ಮಾನವ ದಿನಗಳನ್ನು ಸೃಜಿಸಿ ಗ್ರಾಮೀಣ ಕೃಷಿ ಕೂಲಿ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಲು ಮುಂಡರಗಿ ತಾಲೂಕು ಪಂಚಾಯತಿ ಮುಂದಾಗಿದೆ. ಜತೆಗೆ ಕೃಷಿ ಕಾರ್ಮಿಕರನ್ನು ಸೆಳೆಯಲು ಕೆಲಸ ಮುಗಿಸಿದ ನಂತರ ದೇಸಿ ಆಟಗಳನ್ನು ಆಡಿಸಲಾಗುತ್ತಿದೆ. ಮಹಿಳಾ ಕಾರ್ಮಿಕರಿಂದ ಸೋಬಾನ ಪದ (ಜನಪದ ಹಾಡು) ಹಾಡಿಸಿ ಮನರಂಜನೆಯನ್ನೂ ನೀಡಲಾಗುತ್ತಿದೆ. ಜೊತೆಗೆ ಕಬ್ಬಡ್ಡಿ, ಖೋ ಖೋ ಎಂಬ ಎಲೆ ಮರೆ ಕಾಯಿಯಂತಹ ಕ್ರೀಡೆಗಳಿಗೆ ನರೇಗಾ ಕಾಮಗಾರಿ ಮೂಲಕ ಜನಪ್ರಿಯ ಮಾಡಲು ಸಜ್ಜಾಗಿದೆ. ಅದರಲ್ಲೂ ದೇಸಿ ಕ್ರೀಡೆಗಳನ್ನು ಆಯ್ದುಕೊಂಡು ಕೂಲಿಕಾರ ಮಹಿಳೆಯರನ್ನು ಇಲ್ಲಿ ಸಕ್ರಿಯ ಮಾಡಿರುವುದು ತುಂಬ ವಿಶೇಷ.

ದುಡಿಯುವ ಕೂಲಿಕಾರರಿಗೆ ಮನರಂಜನೆಯು ಮುಖ್ಯ. ಮಳೆಗಾಲ ಮರೀಚಿಕೆಯಾದ ಈ ದಿನಗಳ ನಡುವೆ ನರೇಗಾ ಯೋಜನೆ ಗ್ರಾಮೀಣ ಜನರಿಗೆ ದಾರಿದೀಪ. ಇದನ್ನು ಮನಗಂಡ ಮುಂಡರಗಿ ತಾಲೂಕು ಪಂಚಾಯತಿ ಸುಸ್ಥಿರ ನರೇಗಾ ಅಂಕಿ ಸಂಖ್ಯೆ ಅಭಿವೃದ್ಧಿಯತ್ತ ಸಾಂಸ್ಕೃತಿಕ, ಜನಪದ ಚಟುವಟಿಕೆಗಳ ಮೂಲಕ ಗಮನಹರಿಸಿ ಜನರಿಗೆ ಮಾಹಿತಿ ತಲುಪಿಸುತ್ತಿರುವುದು ಮಾದರಿ ಸಂಗತಿ.ಪುರುಷರಿಗಿಂತ ಗ್ರಾಮೀಣ ಪ್ರದೇಶದ ಮಹಿಳೆಯರೇ ಈ ಆಟದಲ್ಲಿ ಹೆಚ್ಚು ತೊಡಗಿರುವುದು ಗಮನಿಸತಕ್ಕ ಅಂಶ. ಹಾಗಾಗಿ ಮುಂಡರಗಿ ತಾಲೂಕು ಪಂಚಾಯತ ಕಳೆದ ವರ್ಷ ನರೇಗಾ ಕಾಮಗಾರಿಗಳಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣದಲ್ಲಿ ಶೇಕಡಾ 50% ರಷ್ಟು ಯಶಸ್ಸು ಸಾಧಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ನರೇಗಾ ಕಾಮಗಾರಿಗಳ ಜೀವನಾಡಿ,ಭಾರತ ಹಳ್ಳಿಗಳಿಂದ ಕೂಡಿದ ದೇಶ. ಬೇಸಿಗೆ ಕಾಲದಲ್ಲಿ ಗ್ರಾಮೀಣ ಕೂಲಿ ಕಾರ್ಮಿಕರಿಗೆ ಕೆಲಸ ಸಿಕ್ಕರೆ ಆಗುವ ಅನುಕೂಲ ನೂರೆಂಟು. ಆ ದಿಶೆಯಲ್ಲಿ ಮುಂಡರಗಿ ತಾಪಂ ಕಾರ್ಯನಿರತವಾಗಿದೆ.

# ಲೋಕಸಭಾ ಚುನಾವಣೆ: ಪೊಲೀಸ್ ವೀಕ್ಷಕರ ಆಗಮನ: ಸಾರ್ವಜನಿಕರ ಭೇಟಿಗೆ ಅವಕಾಶ



ಕೊಪ್ಪಳ, ಏಪ್ರಿಲ್ –: ಭಾರತ ಚುನಾವಣಾ ಆಯೋಗವು ಮಾರ್ಚ್ 16 ರಂದು ಲೋಕ ಸಭಾ ಚುನಾವಣೆ–2024 ರ ಅಧಿಸೂಚನೆ ಹೊರಡಿಸಿದ್ದು, 08–ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ಪೊಲೀಸ್ ವೀಕ್ಷಕರನ್ನಾಗಿ ಡಾ. ಸತೀಶ್ ಕುಮಾರ್ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದೆ. ಪೊಲೀಸ್ ವೀಕ್ಷಕರಾದ ಡಾ. ಸತೀಶ್ ಕುಮಾರ್ ಅವರು ಜಿಲ್ಲೆಗೆ ಆಗಮಿಸಿದ್ದು, ಜಿಲ್ಲಾ ಕೇಂದ್ರ ಸ್ಥಾನದಲ್ಲಿದ್ದು, ಸಾರ್ವಜನಿಕರಿಗೆ ಲಭ್ಯವಿರುತ್ತಾರೆ. ಇವರನ್ನು ಜಿಲ್ಲಾಡಳಿತ ಭವನದಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ಸಾರ್ವಜನಿಕರು ಭೇಟಿ ಮಾಡಿ ಲೋಕಸಭಾ ಚುನಾವಣೆಗೆ ಸಂಬಂಧಿಸಿದ ಅಹವಾಲು, ಮಾಹಿತಿಯನ್ನು ಸಲ್ಲಿಸಬಹುದಾಗಿದೆ. ಅಥವಾ ಪೊಲೀಸ್ ವೀಕ್ಷಕರ ಮೊ.ಸಂ: 9019710952 ಗೆ ಕರೆ ಮಾಡಿಯೂ ಅಹವಾಲು ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಸಂಭ್ರಮದ ಮಾರುತೇಶ್ವರ ರಥೋತ್ಸವ



ಯರಗಟ್ಟಿ: ಸಮೀಪದ ಶೀಲ್ತಿಭಾವಿ ಗ್ರಾಮದಲ್ಲಿ ದವನದ ಹುಣ್ಣಿಮೆಯ ನಿಮಿತ್ಯ ಜರಗುವ ಐತಿಹಾಸಿಕ ಪರಂಪರೆಉಳ ಮಾರುತೇಶ್ವರ ಜಾತ್ರೆ ನಿಮಿತ್ತ ಬುಧವಾರ ಸಂಭ್ರಮದ ರಥೋತ್ಸವ ಜರುಗಿತು. ಜಾತ್ರೆ ನಿಮಿತ್ತ ಬೆಳಗ್ಗೆ ಮಾರುತೇಶ್ವರ ಸನ್ನಿಧಿಗೆ ವಿಶೇಷ ಪೂಜೆ, ಅಭಿಷೇಕ ಜರಗಿತು. ಶೀಲ್ತಿಭಾವಿ–ಜಮನಾಳ ಗ್ರಾಮದ ಸುತ್ತಮುತ್ತಲಿನ ಭಕ್ತರು ದೀರ್ಘದಂಡ ನಮಸ್ಕಾರಗಳನ್ನು ಸಲ್ಲಿಸಿದರು. ನಂತರ ರಥದಲ್ಲಿ ಮಾರುತೇಶ್ವರ ಮೂರ್ತಿ ಪ್ರತಿಷ್ಠಾಪಿಸಲಾಯಿತು.ಸಾಗುತ್ತಿದ್ದ ರಥಕ್ಕೆ ಸಾರ್ವಜನಿಕರು ಖಾರೀಕು, ತೆಂಗಿನಕಾಯಿ, ಬೆಂಡು ಬೆತ್ತಾಸು ಸಮರ್ಪಿಸಿದರು. ರಥೋತ್ಸವದ ಸುತ್ತ ಪಲ್ಲಕ್ಕಿ ತಿರುಗಿತು.